**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .**

**ಸಿ.ಸಿ.ನಂ. 1301/2014**

| | | |
|---|---|---|
| ಸಾಕ್ಷಿದಾರರ ಹೆಸರು | : | ಆನಂದ ಎಸ್ |
| ತಂದೆಯ ಹೆಸರು | : | ಸಣ್ಣಯ್ಯ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಕಾರ್ಖಾನೆ ನೌಕರ |
| ವಾಸಸ್ಥಳ | : | ಬ್ಯಾಳಾರು, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 05.08.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಈಗ ನನಗೆ ತೋರಿಸುತ್ತಿರುವ ನಿಪಿ-2 ರಲ್ಲಿ ನನ್ನ ಸಹಿ ಇದ್ದು, ಸದರಿ ಸಹಿಯನ್ನು ಎಲ್ಲಿ ಹಾಕಿರುತ್ತೇನೆಂದು ನನಗೆ ನೆನಪಿಲ್ಲ. ಸಾಕ್ಷಿಯು ನಿಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿ.ಪಿ-2 ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

ಆರೋಪಿ ಬಸ್ಸನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಅಪಘಾತಪಡಿಸಿದ್ದರಿಂದ ದೂರು ದಾಖಲಾಗಿದ್ದು, ನಂಜನಗೂಡು ಗ್ರಾಮಾಂತರ ಪೊಲೀಸರು ದಿನಾಂಕ 27.02.2014 ರಂದು ನಂಜನಗೂಡು-ಹುಲ್ಲಹಳ್ಳಿ ಮುಖ್ಯರಸ್ತೆಯಲ್ಲಿ ಬ್ಯಾಳಾರು

ಗ್ರಾಮದ ಹತ್ತಿರ ನನ್ನ ಮತ್ತು ಇತರೆ ಪಂಚರ ಸಮಕ್ಷಮ ನಿಪಿ-2 ರಂತೆ ಮಹಜರ್ ಮಾಡಿ, ಕೆಎ-ಇಜೆಡ್-1447 ಸಂಖ್ಯೆಯ ಸ್ಕೂಟರನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಸ್ಕೂಟರನ್ನು ವಶಪಡಿಸಿಕೊಂಡು ಮಹಜರ್ ಮಾಡಿದ್ದರೂ ಕೂಡ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ** ಏನೂ ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/–

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**
**ನಂಜನಗೂಡು.**